ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಸದನ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 9/1/21

# ಪರಿಷತ್ ಗಲಾಟೆ ಸದನ ಸಮಿತಿಗೆ ಬಿಜೆಪಿ ಸದಸ್ಯರು ರಾಜೀನಾಮೆ

**ಬೆಂಗಳೂರು:** ಪರಿಷತ್ತಿನಲ್ಲಿ ಕಳೆದ ತಿಂಗಳು 15ರಂದು ನಡೆದ ಗಲಾಟೆ ತನಿಖೆಗಾಗಿ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ರಚಿಸಿದ್ದ ಮರಿತಿಬ್ಬೇಗೌಡರ ನೇತೃತ್ವದ ಸದನ ಸಮಿತಿಗೆ ಬಿಜೆಪಿಯ ಸದಸ್ಯರು ರಾಜೀನಾಮೆ ಸಲ್ಲಿಸಿದ್ದಾರೆ.

ಈ ಸಮಿತಿಯಲ್ಲಿ ಎಚ್.ವಿಶ್ವನಾಥ್ ಜತೆಗೆ ಬಿಜೆಪಿಯ ಎಸ್.ವಿ.ಸಂಕನೂರು, ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, ಆರ್.ಬಿ.ತಿಮ್ಮಾಪುರ ಅವರು ಸದಸ್ಯರಾಗಿದ್ದಾರೆ. ಡಿ.15 ರಂದು ನಡೆದ ಘಟನೆ ಸಂಬಂಧ ವಿಚಾರಣೆ ನಡೆಸಿ 20 ದಿನಗಳ ಒಳಗೆ ವರದಿ ಸಲ್ಲಿಸುವಂತೆ ಕಾರ್ಯದರ್ಶಿ ಇತ್ತೀಚೆಗೆ ಆದೇಶ ಹೊರಡಿಸಿದ್ದರು. ಆದರೆ ಈಗ ವಿಶ್ವನಾಥ್, ಸಂಕನೂರು ರಾಜೀನಾಮೆಯಿಂದಾಗಿ ಸದನ ಸಮಿತಿಗೆ ಆರಂಭದಲ್ಲೇ ವಿಘ್ನವಾಗಿದೆ.

● **ಇದು ನಾವೆಲ್ಲಾ ತಲೆ ತಗ್ಗಿಸುವ ವಿಚಾರ. ಇದನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ಉನ್ನತಮಟ್ಟದ ತನಿಖೆ ಆಗಬೇಕು. ನಾವೇ ಆ ಗದ್ದಲ ಸಂದರ್ಭದಲ್ಲಿ ಅಲ್ಲಿ ಇದ್ದೆವು. ಹಾಗಾಗಿ ನಾನು ಇದನ್ನು ಧಿಕ್ಕರಿಸಿ ರಾಜೀನಾಮೆ ನೀಡಿ ಹೊರ ಬಂದಿದ್ದೇನೆ. ಲೋಕಸಭಾ ಅಧ್ಯಕ್ಷ ಓಂಬಿರ್ಲಾ ಕೂಡಾ ಇದರ ಬಗ್ಗೆ ತನಿಖೆ ಆಗಬೇಕು ಎಂದಿದ್ದಾರೆ. ಹಾಗಾಗಿ ಸರಕಾರ ಈ ಬಗ್ಗೆ ಗಮನ ಹರಿಸಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕು.**

**-ಎಚ್.ವಿಶ್ವನಾಥ್**